**<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.</u>**

ಸಿ.ಸಿ. ನಂಃ 1533/2022 ಸಿಡಬ್ಲೂ: 2 ಪಿಡಬ್ಲೂ: 6

ಪ್ರಮಾಣವಚನ ಬೋಧಿಸಲಾಯಿತು ದಿಃ 03-06-2026

ಹೆಸರು : ಗೋಳಪ್ಪ

ತಂದೆ ಹೆಸರು : ಶಿವರಾಯ

ವಯಸ್ಸು : 47 ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸಸ್ಥಳ : ಅಂಗನಳ್ಳಿ ತಾಃ ಸೇಡಂ

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ಚಾಸಾ-1 ಮತ್ತು 3 ರವರು ನನ್ನ ಗ್ರಾಮದವರು. ನ್ಯಾಯಾಲಯದ ಮುಂದೆ ಇರುವ ಆರೋಪಿತರು ನನಗೆ ಗೊತ್ತು.

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ರೀತಿಯ ಮಾಹಿತಿ ಇರುವುದಿಲ್ಲ. ಪೋಲೀಸರು ನಮ್ಮ ಸಮಕ್ಷಮ ಯಾವುದೇ ರೀತಿಯ ಪಂಚನಾಮೆಗಳು ಮಾಡಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಗುನ್ನೆ ಸ್ದಳದ ಪಂಚನಾಮೆ ಆಗಿದ್ದು, ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುತ್ತಾರೆ. ಅದನ್ನು ಈಗಾಗಲೇ ನಿಪಿ-5 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು. ಆದರೇ ನಿಪಿ-5 ರಲ್ಲಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ವಸ್ತುವನ್ನು ಜಪ್ತಿ ಪಡಿಸಿಕೊಂಡಿಲ್ಲ. ಪೋಲಿಸರ ಕೋರಿಕೆಯ ಮೇರೆಗೆ ನಿಪಿ-5ಕ್ಕೆ ಸಹಿ ಹಾಕಿರುತ್ತೇನೆ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**<u>ವಾಟೀಸವಾಲುಃ</u>** ಮಾನ್ಯ ಸ.ಸ.ಅ ರವರಿಂದ:

ದಿಃ 21.07.2022 ರಂದು ಮಧ್ಯಾಹ್ನ 02.30 ಗಂಟೆಯಿಂದ 03.30 ಗಂಟೆಯವರೆಗೆ ಚಾಸಾ 1 ರವರು ತೋರಿಸಿದಂತೆ ಗುನ್ನೆ ಸ್ಥಳದಲ್ಲಿ ಪೋಲೀಸರು ನನ್ನ ಹಾಗು ಚಾಸಾ 3 ರವರ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಕಾಲಕ್ಕೆ ಮು.ಮಾ-1ನ್ನು

ವಶಪಡಿಸಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-5 ರಲ್ಲಿರುವ ವಿಷಯಗಳು ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ವಾಟೀಸವಾಲುಃ ಆರೋಪಿ ಪರ ವಕೀಲರಿಂದ: ವಕೀಲರು ವಾಟೀಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.**

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**